ವಿಶ್ವ ಬ್ಯಾಂಕಿನಿಂದ 600 ಕೋಟಿ ರೂಪಾಯಿ ಗ್ರಾಮ ಸ್ವರಾಜ್ ಗಾಂಧೀಜಿ ಕಲ್ಪನೆಯಿಂದ ದುಡ್ಡು ಪಡೆದಿದ್ದೀರಿ. ಇದೂ ಕೂಡ ಎಲ್ಲಿ ಆಗಿದೆ ಎಂದು ನಮಗೆ ಗೊತ್ತಾಗುತ್ತಿಲ್ಲ. ದುಡ್ಡು ನಿಜವಾದಂತಹ ರೂಪದಲ್ಲಿ ಖರ್ಚಾಗಬೇಕು ಮತ್ತು ಜನರಿಗೆ ಅನುಕೂಲವಾಗಬೇಕೆನ್ನುವ ಕಳಕಳಿಯನ್ನು ಇಟ್ಟುಕೊಂಡು ನನಗೆ ಮಾತನಾಡುವುದಕ್ಕೆ ಅವಕಾಶ ಮಾಡಿಕೊಟ್ಟ ತಮಗೆ ವಂದಿಸಿ ನನ್ನ ಮಾತನ್ನು ಮುಗಿಸುತ್ತೇನೆ.

ಅಧ್ಯಕ್ಷರು:– ಈಗ ಎರಡು ವಿಧೇಯಕಗಳನ್ನು ಮಂಡಿಸುತ್ತಿದ್ದೇನೆ.

7. ಶಾಸನ ರಚನೆ ವಿಧೇಯಕಗಳ ಮಂಡನೆ

1. ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ (ತಿದ್ದುಪಡಿ) ವಿಧೇಯಕ 2014

ಮಂಡನೆಗೆ ಅನುಮತಿ ಕೋರಿಕೆ

ಅಧ್ಯಕ್ಷರು:– ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ (ತಿದ್ದುಪಡಿ) ವಿಧೇಯಕ 2014 ಅನ್ನು ಮಾನ್ಯ ಹೆಚ್. ಆಂಜನೇಯರವರು ಸಭೆಯಲ್ಲಿ ಮಂಡಿಸಬೇಕು.

ಶ್ರೀ ಟಿ.ಬಿ. ಜಯಚಂದ್ರ (ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು):– ಮಾನ್ಯ ಅಧ್ಯಕ್ಷರೆ, ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಪರವಾಗಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ (ತಿದ್ದುಪಡಿ) ವಿಧೇಯಕ 2014 ಅನ್ನು ಸಭೆಯ ಮುಂದೆ ಮಂಡಿಸಲು ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು:– ಈಗ ಪ್ರಸ್ತಾವನೆಯನ್ನು ಮಂಡಿಸಲಾಯಿತು, ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವನೆ ಹೀಗಿದೆ,

2014ನೇ ಸಾಲಿನ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿಯನ್ನು ನೀಡಬೇಕು.

ಪ್ರಸ್ತಾವದ ಪರವಾಗಿರುವವರು 'ಹೌದು' ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು 'ಇಲ್ಲ' ಎಂದು ಸೂಚಿಸಬೇಕು.

ಪ್ರಸ್ತಾವ 'ಹೌದು' ಎನ್ನುವವರ ಪರವಾಗಿದೆ

ಪ್ರಸ್ತಾವ 'ಹೌದು' ಎನ್ನುವವರ ಪರವಾಗಿದೆ

ಪ್ರಸ್ತಾವ 'ಹೌದು' ಎನ್ನುವವರ ಪರವಾಗಿದೆ

ಪ್ರಸ್ತಾವುವು ಅಂಗೀಕೃತವಾಗಿದೆ.

ಮಾನ್ಯ ಸಚಿವರು ಈ ವಿಧೇಯಕವನ್ನು ಮಂಡಿಸಬೇಕು.

ಶ್ರೀ ಟಿ.ಬಿ. ಜಯಚಂದ್ರ:– ಮಾನ್ಯ ಅಧ್ಯಕ್ಷರೆ, 2014ನೇ ಸಾಲಿನ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:– ವಿಧೇಯಕವನ್ನು ಮಂಡಿಸಲಾಯಿತು.